ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

15

ಶಾಖೆ / ವಿಷಯ : DEPARTMENT / SUBJECT: ಕಾರ್ಯ ಆಯೋಗ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 19/1/2020

ಗಣ್ಯರಿಂದ ಕೋವಿಡ್ ನಿಯಮ ಉಲ್ಲಂಘನೆಗೆ ಕ್ರಮ ಏಕಿಲ್ಲ?

ಬೆಂಗಳೂರು: ಹಲವು ಗಣ್ಯರು ಕೋವಿಡ್-19 ಮಾರ್ಗಸೂಚಿ ಉಲ್ಲಂಘಿಸಿರುವ ಪ್ರಕರಣಗಳು ಕಣ್ಮುಂದಿದ್ದರೂ ಸರಕಾರ ಆಂಧವರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದೇ ಮುಚ್ಚಿಹಾಕುವ ಯತ್ನ ನಡೆಸುತ್ತಿದೆ ಎಂದು ಹೈಕೋರ್ಟ್ ಪೀಠ ಸರಕಾರದ ವಿರುದ್ಧ ಅಸಮಾಧಾನ ಹೊರಹಾಕಿದೆ.

ಸರಕಾರಕ್ಕೆ ಕೋರ್ಟ್ ಪ್ರಶ್ನೆ

ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ್ ನೇತೃತ್ವದ ಪೀಠ, ''ಮಾಸ್ಕ್ ಧರಿಸದಿರುವ ಮತ್ತು ಸಾಮಾಜಿಕ ಅಂತರ ಕಾಪಾಡಿಕೊಳ್ಳದಿರುವ ವಿಚಾರದಲ್ಲಿ ಅಧಿಕಾರಿಗಳು ಕ್ರಮ ಜರುಗಿಸುತ್ತಿಲ್ಲ,'' ಎಂದು ಬೇಸರ ವ್ಯಕ್ತಪಡಿಸಿತು. ನಟರೊಬ್ಬರ ಅಂತ್ಯಕ್ರಿಯೆ ವೇಳೆ ಮಾರ್ಗಸೂಚಿ ಉಲ್ಲಂಘನೆ ಆರೋಪ ಹಾಗೂ ಸಚಿವ ಡಾ.ಕೆ. ಸುಧಾಕರ್ ಅವರು ಖಾಸಗಿ ಈಜುಕೊಳ ಬಳಸಿದ ವಿಚಾರದಲ್ಲಿ ನಿಯಮಗಳ ಬಗ್ಗೆ ಸ್ಪಷ್ಟನೆ ನೀಡಲು ಸರಕಾರಕ್ಕೆ ಸೂಚನೆ ನೀಡಿತು.

ಚಾಮುಂಡಿ ಬೆಟ್ಟಕ್ಕೆ ನಟ ದರ್ಶನ್, ಸಂಸದೆ ಶೋಭಾ ಕರಂದ್ಲಾಜೆ ಮತ್ತಿತರ ಗಣ್ಯರಿಗೆ ಕ್ರಮ ತೆಗೆದುಕೊಂಡಿದ ವಿಚಾರದಲ್ಲಿ ಸರಕಾರ ನೀಡಿರುವ ಸ್ಪಷ್ಟನೆ ತೃಪ್ತಿಕರವಾಗಿಲ್ಲ ಹಾಗಾಗಿ, ನಿಯಮಗಳ ಕುರಿತು ಸ್ಪಷ್ಟನೆ ನೀಡಬೇಕು ಎಂದು ಸೂಚಿಸಿ, ಪ್ರಕರಣವನ್ನು ಫೆ.೦೬ಕ್ಕೆ ಮುಂದೂಡಿತು.